**Akashvani : Bangalore**
**Regional Bulletin In Kannada**
**18.04.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**18.04.2025 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ಅಂತಾರಾಷ್ಟ್ರೀಯ ಹವ್ಯಾಸಿ ರೇಡಿಯೋ ಒಕ್ಕೂಟದ ಶತಮಾನೋತ್ಸವ ಕಾರ್ಯಕ್ರಮ**

**೨. ಜಾತಿಗಣತಿ ವರದಿಯು ಸಣ್ಣ ಸಣ್ಣ ಸಮುದಾಯಕ್ಕೆ ಹೆಚ್ಚಿನ ಒತ್ತು**

**೩. ಏಸು ಕ್ರಿಸ್ತರ ತ್ಯಾಗ ಮತ್ತು ಬಲಿದಾನ ಸ್ಮರಿಸಿ, ಎಲ್ಲೆಡೆ ಶ್ರದ್ಧಾ ಭಕ್ತಿಯಿಂದ ಗುಡ್ ಫ್ರೈಡೇ ಆಚರಣೆ**

**೪. ವಕ್ಫ್ ತಿದ್ದುಪಡಿ ಕಾಯ್ದೆಯನ್ನು ವಿರೋಧಿಸಿ ಬೃಹತ್ ಪ್ರತಿಭಟನಾ ಸಮಾವೇಶ**

**<><*<><>*><>**

ಬೆಂಗಳೂರಿನ ಬಾಲಭವನದಲ್ಲಿಂದು ಆಯೋಜಿಸಿದ್ದ ಅಂತಾರಾಷ್ಟ್ರೀಯ ಹವ್ಯಾಸಿ ರೇಡಿಯೋ ಒಕ್ಕೂಟದ ಶತಮಾನೋತ್ಸವ ಕಾರ್ಯಕ್ರಮವನ್ನು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಉದ್ಘಾಟಿಸಿದರು. ಈ ವೇಳೆ ಬಿ.ದಯಾನಂದ, ಅಂತಾರಾಷ್ಟ್ರೀಯ ಹವ್ಯಾಸಿ ರೇಡಿಯೋ ಒಕ್ಕೂಟವು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಾಮುಖ್ಯತೆ ಹೊಂದಿದೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ಸಮಯದಲ್ಲಿ ತುರ್ತು ಸಂವಹನವನ್ನು ಹೆಚ್ಚು ಪ್ರೋತ್ಸಾಹಿಸಿದೆ. ಹೊಸ ಆಪರೇಟರ್‌ಗಳಿಗೆ ಮಾರ್ಗದರ್ಶನ ನೀಡಲು ಹಾಗೂ ಸಂಶೋಧನೆ ಕೈಗೊಳ್ಳಲು ತಾಂತ್ರಿಕ ಸಂಪನ್ಮೂಲ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು. ಅಂತಾರಾಷ್ಟ್ರೀಯ ಹವ್ಯಾಸಿ ರೇಡಿಯೋ ಒಕ್ಕೂಟದ ಅಧ್ಯಕ್ಷ ರಮೇಶ್ ಕುಮಾರ್, ಅಂತಾರಾಷ್ಟ್ರೀಯ ಹವ್ಯಾಸಿ ರೇಡಿಯೋ ಒಕ್ಕೂಟವು ಇಂಡಿಯಾ ಜಾಗತಿಕ ಚಳವಳಿಯಲ್ಲಿ ಭಾರತದ ಧ್ವನಿಯನ್ನು ಮುನ್ನಡೆಸುತ್ತಿದೆ. ಹವ್ಯಾಸಿ ರೇಡಿಯೋ ಒಕ್ಕೂಟವು ತನ್ನ ೧೦೦ ವರ್ಷಗಳ ಸ್ಮರಣಾರ್ಥವಾಗಿ ಹವ್ಯಾಸಿ ರೇಡಿಯೋ ಉತ್ಸಾಹಿಗಳು, ನಾವಿನ್ಯಕಾರರು ಹಾಗೂ ತುರ್ತು ಸಂವಹನಕಾರರನ್ನು ಪ್ರೇರೇಪಿಸುತ್ತಿದೆ. ಈ ಒಕ್ಕೂಟವು ೧೯೫ಲ ರಿಂದಲೂ ಮುಂಚೂಣಿಯಲ್ಲಿ ಭಾರತವನ್ನು ಪ್ರತಿನಿಧಿಸುತ್ತಿದೆ ಎಂದು ತಿಳಿಸಿದರು. ಡಿಸಿಪಿ ಕಾಸಿಂರಾಜ, ರೇಡಿಯೋ ಪ್ರಸರಣ ಮತ್ತು ಎಲೆಕ್ಟ್ರಾನಿಕ್ಸ್‌ನಲ್ಲಿ ವೈಜ್ಞಾನಿಕ ಪ್ರಯೋಗಗಳನ್ನು ಕೈಗೊಳ್ಳಲು ಸಹಕಾರಿಯಾಗಿದೆ. ನೈಸರ್ಗಿಕ ವಿಪತ್ತುಗಳು ಮತ್ತು ಮೂಲಸೌಕರ್ಯ ವೈಫಲ್ಯಗಳ ಸಂದರ್ಭದಲ್ಲಿ ತುರ್ತು ಸಂವಹನವನ್ನು ಕೈಗೊಳ್ಳಲು ಹವ್ಯಾಸಿ ರೇಡಿಯೋ ಒಕ್ಕೂಟದ ಕರ್ತವ್ಯ ನಿರ್ವಹಣೆ ಶ್ಲಾಘನೀಯ ಎಂದು ತಿಳಿಸಿದರು.

**<><*<><>*><>**

ಜಾತಿಗಣತಿ ವರದಿಯು ಸಣ್ಣ ಸಣ್ಣ ಸಮುದಾಯಗಳನ್ನು ಸುಧಾರಿಸುವ ನಿಟ್ಟಿನಲ್ಲಿ ಮಹತ್ವದ ಪಾತ್ರ ವಹಿಸಲಿದ್ದು, ರಾಜಕೀಯ ಗೊಂದಲಗಳನ್ನು ಸೃಷ್ಟಿಸಬಾರದು ಎಂದು ಸಣ್ಣ ನೀರಾವರಿ ಸಚಿವ ಎಸ್. ಬೋಸರಾಜು ತಿಳಿಸಿದ್ದಾರೆ. ವಿಕಾಸಸೌಧದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಅವರು, ಸಣ್ಣ ಸಮುದಾಯಗಳನ್ನು ಯಾರೂ ಹೆಚ್ಚಾಗಿ ಗಮನಹರಿಸುವುದಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದನ್ನು ಗಮನದಲ್ಲಿಟ್ಟುಕೊಂಡು ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆಯನ್ನು ನಡೆಸುವ ತೀರ್ಮಾನ ಕೈಗೊಂಡರು ಇದಕ್ಕಾಗಿ ೧೯೫ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ ಎಂದರು. ರಾಜ್ಯದ ಜನರ ಆರ್ಥಿಕ ಪರಿಸ್ಥಿತಿ ಮತ್ತು ಶೈಕ್ಷಣಿಕ ಪರಿಸ್ಥಿತಿ ಹೇಗಿದೆ ಎಂಬುದರ ಕುರಿತು ಈ ವರದಿ ಮೂಲಕ ಅಧ್ಯಯನ ಮಾಡಲಾಗಿದೆ. ಅನಗತ್ಯವಾಗಿ ಇದನ್ನು ರಾಜಕೀಯಕ್ಕೆ ಬಳಸಿಕೊಳ್ಳಲಾಗುತ್ತಿದೆ. ಈ ಬಗ್ಗೆ ಮತ್ತೊಮ್ಮೆ ಚರ್ಚಿಸಲು ಮೇ ೨ರಂದು ಸಚಿವ ಸಂಪುಟ ಸಭೆ ಕರೆಯಲಾಗಿದೆ ಎಂದು ತಿಳಿಸಿದರು. ಈ ಹಿಂದಿನ ಸರ್ಕಾರವು ಸಣ್ಣ ಗುತ್ತಿಗೆದಾರರ ೧೨ ಸಾವಿರದ ೪೯೩

ಕೋಟಿ ರೂಪಾಯಿ ಬಿಲ್ ಬಾಕಿ ಉಳಿಸಿತ್ತು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಅದನ್ನು ಬಿಡುಗಡೆ ಮಾಡಲಾಗಿದೆ. ೫೦ ಲಕ್ಷ ರೂಪಾಯಿ ಒಳಗಿನ ಗುತ್ತಿಗೆ ಕಾಮಗಾರಿಯ ಬಿಲ್ ಅನ್ನು ಪಾವತಿಸಲಾಗಿದೆ ಎಂದರು.

<><*<><>*><>

ದಾವಣಗೆರೆ, ಚಿತ್ರದುರ್ಗ ಮತ್ತು ಶಿವಮೊಗ್ಗ ಜಿಲ್ಲೆಗಳ ೧೨೧ ಕ್ಕೂ ಅಧಿಕ ಕೆರೆಗಳಿಗೆ ನೀರು ತುಂಬಿಸುವ ಸಾಸ್ವೆಹಳ್ಳಿ ಏತ ನೀರಾವರಿ ಯೋಜನೆ ಬರುವ ಮಳೆಗಾಲದಲ್ಲಿ ಲೋಕಾರ್ಪಣೆಗೊಳ್ಳಲಿದೆ ಎಂದು ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜ್ ಹೇಳಿದ್ದಾರೆ. ಚನ್ನಗಿರಿಯ ತೋಟ ಉತ್ಪನ್ನ ಮಾರಾಟ ಸಹಕಾರ ಸಂಘ 'ತುಮ್‌ಕೋಸ್' ನಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಮಾತನಾಡಿದ ಅವರು, ಹೊನ್ನಾಳಿ, ಶಿವಮೊಗ್ಗ ಗ್ರಾಮಾಂತರ, ಚನ್ನಗಿರಿ, ಮಾಯಕೊಂಡ, ಹೊಳಲ್ಕೆರೆ, ಚಿತ್ರದುರ್ಗ ತಾಲ್ಲೂಕಿನ ಕೆರೆಗಳಿಗೆ ನೀರು ತುಂಬಿಸುವ ೬೦೪ ಕೋಟಿ ರೂಪಾಯಿ ಮೊತ್ತದ ಮಹತ್ವಾಕಾಂಕ್ಷೆಯ ಯೋಜನೆ ಇದಾಗಿದೆ ಎಂದರು. ಬಾಕಿ ಇರುವ ಕಾಮಗಾರಿಯನ್ನು ಶೀಘ್ರವಾಗಿ ಮುಗಿಸಿ ಬರುವ ಮಳೆಗಾಲದಲ್ಲಿ ಮುಖ್ಯಮಂತ್ರಿ ಗಳಿಂದ ಲೋಕಾರ್ಪಣೆಗೊಳಿಸಲಾಗುವುದು ಎಂದು ಹೇಳಿದರು.

<><*<><>*><>

ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಹೊಸಹಳ್ಳಿ ಹೋಬಳಿಯಲ್ಲಿ ನಾಳೆ ತಾಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ್ ಹೇಳಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ಮಾತನಾಡಿದ ಅವರು, ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರು ತಮ್ಮ ಕುಂದು ಕೊರತೆಗಳ ಅವಾಲುಗಳನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳಬೇಕು ಎಂದು ಅವರು ಮನವಿ ಮಾಡಿದರು. ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಅಧ್ಯಕ್ಷತೆ ವಹಿಸಲಿದ್ದು, ಜನತಾ ದರ್ಶನ ಕಾರ್ಯಕ್ರಮಕ್ಕೆ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗುವಂತೆ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ನಿರ್ದೇಶಿಸಿದ್ದಾರೆ.

<><*<><>*><>

ಗ್ರಾಮೀಣ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ನರೇಗಾ ಯೋಜನೆಯು ಸಹಕಾರಿಯಾಗಿದೆ ಎಂದು ಗದಗ ಜಿಲ್ಲೆಯ ರೋಣ ತಾಲೂಕ ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಹೇಳಿದ್ದಾರೆ.

<><*<><>*><>

ಬೆಂಗಳೂರು-ಹೊಸಪೇಟೆ ಪ್ಯಾಸೆಂಜರ್ ರೈಲಿಗೆ ಚಿತ್ರದುರ್ಗ ಜಿಲ್ಲೆಯ ಹಲವು ನಿಲ್ದಾಣಗಳಲ್ಲಿ ನಿಲುಗಡೆಗೆ ಹಸಿರು ನಿಶಾನೆ ತೋರಿಸಿ ಸಂಸದ ಗೋವಿಂದ ಕಾರಜೋಳ ಇಂದು ಚಾಲನೆ ನೀಡಿದ್ದಾರೆ. ಮುಂಜಾನೆ ಏಳು ಘಂಟೆಗೆ ಬೆಂಗಳೂರಿನಿಂದ ಹೊರಡುವ ರೈಲು ಒಂಬತ್ತು ಘಂಟೆ ಸುಮಾರಿಗೆ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ, ಹೊಳಲ್ಕೆರೆ, ಚಿಕ್ಕಜಾಜೂರು, ಅಮೃತಾಪುರ, ಚಿತ್ರದುರ್ಗ ಮತ್ತು ಚಳ್ಳಕೆರೆ ನಿಲ್ದಾಣದಲ್ಲಿ ನಿಂತು ಮುಂದೆ ಸಾಗಲಿದೆ.

<><*<><>*><>

ಚಿಕ್ಕಮಗಳೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವು ಪ್ರಾಧಿಕಾರದ ಪ್ಯಾನಲ್ ವಕೀಲರನ್ನಾಗಿ ಮೂರು ವರ್ಷಗಳ ಅವಧಿಗೆ ನೇಮಕ ಮಾಡಿಕೊಳ್ಳಲು ಅರ್ಹ ಕಾನೂನು ವೃತ್ತಿಗಾರರಿಂದ ಅರ್ಜಿಗಳನ್ನು ಆಹ್ವಾನಿಸಿದೆ ಎಂದು ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ವಿ.ಹನುಮಂತಪ್ಪ ತಿಳಿಸಿದ್ದಾರೆ.

<><*<><>*><>

ಯೇಸುಕ್ರಿಸ್ತನನ್ನು ಶಿಲುಬೆಗೇರಿಸಿದ ದಿನವಾದ ಇಂದು ಯೇಸುಕ್ರಿಸ್ತನ ತ್ಯಾಗವನ್ನು ಸ್ಮರಿಸುವ ಹಿನ್ನೆಲೆಯಲ್ಲಿ ಶುಭ ಶುಕ್ರವಾರ ದಿನವನ್ನಾಗಿ ಕ್ರೈಸ್ತ ಧರ್ಮೀಯರು ಪವಿತ್ರ ದಿನವೆಂದು ಭಾವಿಸಿ ಶ್ರದ್ಧಾ ಭಕ್ತಿಗಳಿಂದ ಎಲ್ಲೆಡೆ ಆಚರಿಸುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ ಹಾಗೂ ನೆಲಮಂಗಲದ ಚರ್ಚ್‌ಗಳಲ್ಲಿ

ವಿಶೇಷ ಪ್ರಾರ್ಥನಾ ಸಭೆಗಳನ್ನು ಏರ್ಪಡಿಸಲಾಗಿತ್ತು. ದೊಡ್ಡಬಳ್ಳಾಪುರದ ಸಂತ ಪೇತ್ರರ ಚರ್ಚ್‌ನಲ್ಲಿ ಫಾದರ್ ಆಂಟೋನಿ ಡಿಸೋಜಾ ನೇತೃತ್ವದಲ್ಲಿ ಯೇಸುಕ್ರಿಸ್ತನನ್ನು ಶಿಲುಬೆಗೇರಿಸಿದ ಸಾಂಕೇತಿಕ ವೃತ್ತಾಂತವನ್ನು ರೂಪಕದ ಮೂಲಕ ಪ್ರದರ್ಶಿಸಲಾಯಿತು. ಚರ್ಚನಲ್ಲಿ ವಿಶೇಷ ಪ್ರಾರ್ಥನೆ ಏರ್ಪಡಿಸಲಾಗಿತ್ತು. ಚಿತ್ರದುರ್ಗ ಜಿಲ್ಲೆಯಲ್ಲಿ ಗುಡ್ ಫ್ರೈಡೇ ಹಿನ್ನಲೆ ಹಲವು ಚರ್ಚ್‌ಗಳಲ್ಲಿ ವಿಶೇಷ ಪ್ರಾರ್ಥನೆ ಆಯೋಜಿಸಲಾಗಿತ್ತು. ಕ್ರೈಸ್ತ ಅನುಯಾಯಿಗಳು ಮುಂಜಾನೆ ಚರ್ಚ್‌ಗಳಿಗೆ ತೆರಳಿ ವಿಶೇಷ ಪ್ರಾರ್ಥನೆಯಲ್ಲಿ ಭಾಗವಹಿಸಿದರು. ಚಿತ್ರದುರ್ಗದ ತಾಲೂಕು ಕೇಂದ್ರಗ ಚರ್ಚ್‌ಗಳಲ್ಲಿ ವಿಶೇಶ ಪ್ರಾರ್ಥನಾ ಸಭೆಗಳನ್ನು ಆಯೋಜಿಸಲಾಗಿತ್ತು. ಕೋಲಾರದ ಜಿಲ್ಲೆಯಲ್ಲಿ ಗುಡ್ ಫ್ರೈಡೇ ಅಂಗವಾಗಿ ಸೆಂಟ್ ಮೆಥೋಡಿಸ್ಟ್ ಚರ್ಚ್ ಹಾಗೂ ಕೆ.ಜಿ.ಎಫ್‌ನ ಸಂತ ಮರಿಯಾ ಚರ್ಚ್‌ಗಳಲ್ಲಿ ನಿನ್ನೆ ಸಂಜೆಯಿಂದಲೇ ಕ್ರೈಸ್ತ ಭಾಂದವರು ವಿಶೇಷ ಪ್ರಾರ್ಥನೆ ಸಲ್ಲಿಸುತ್ತಿದ್ದಾರೆ. ಚರ್ಚ್‌ಗಳು ವಿದ್ಯುತ್ ದೀಪಾಲಂಕಾರಗಳಿಂದ ಕಂಗೊಳಿಸುತ್ತಿವೆ. ಭಕ್ತರು ಇಂದು ಉಪವಾಸ, ಧಾರ್ಮಿಕ ಆಚರಣೆಗಳಲ್ಲಿ ತೊಡಗಿದ್ದಾರೆ. ಮೈಸರು ನಗರದ ಸಂತ ಫಿಲೋಮಿನಾ ಚರ್ಚ್‌ನಲ್ಲಿ ಏಸು ಕ್ರಿಸ್ತರ ತ್ಯಾಗ ಮತ್ತು ಬಲಿದಾನ ಸ್ಮರಿಸಿ, ಆರಾಧಿಸುವ ಗುಡ್ ಫ್ರೈಡೇ ಪ್ರಯುಕ್ತ ಚರ್ಚ್‌ಗಳಲ್ಲಿ ವಿಶೇಷ ಪ್ರಾರ್ಥನೆ ನಡೆಯಿತು. ಸಂತ ಫಿಲೋಮಿನಾ ಚರ್ಚ್ ನಲ್ಲಿ ಯೇಸು ಕ್ರಿಸ್ತನ ಪ್ರೀತಿ, ಸೇವೆ ಮತ್ತು ತ್ಯಾಗ ಮಹತ್ವ ಕುರಿತು ಬೋಧಿಸಿ, ಪಾಲಿಸುವಂತೆ ಸಂದೇಶ ನೀಡಲಾಯಿತು. ಚರ್ಚ್‌ಗಳಲ್ಲಿ ಶನಿವಾರ ರಾತ್ರಿ ಜಾಗರಣೆ ನಡೆಸುವ ಕ್ರೈಸ್ತ ಬಾಂಧವರು ಭಾನುವಾರವೂ ಯೇಸುಕ್ರಿಸ್ತರ ತ್ಯಾಗವನ್ನು ಸ್ಮರಿಸಿ ಆರಾಧನೆಯಲ್ಲಿ ತೊಡಗಲಿದ್ದಾರೆ.

<><*<><>*><>

ವಕ್ಫ್ ತಿದ್ದುಪಡಿ ಕಾಯ್ದೆಯನ್ನು ವಿರೋಧಿಸಿ ಕರ್ನಾಟಕ ಉಲಮಾ ಒಕ್ಕೂಟದ ನೇತೃತ್ವದಲ್ಲಿ ಇಂದು ಅಪರಾಹ್ನ ೪ ಗಂಟೆಗೆ ಮಂಗಳೂರಿನ ಅಡ್ಯಾರ್ ಕಣ್ಣೂರಿನ ಶಾ ಗಾರ್ಡನ್‌ನಲ್ಲಿ ಬೃಹತ್ ಪ್ರತಿಭಟನಾ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಖಾಝಿಗಳ ನೇತೃತ್ವದಲ್ಲಿ ಸಮಾವೇಶ ನಡೆಯಲಿದ್ದು, ಬೈಕ್ ರ್‍ಯಾಲಿ, ಪ್ರಚೋದನಕಾರಿ ಭಾಷಣಗಳಿಗೆ ಅವಕಾಶ ಇಲ್ಲ. ಯಾವುದೇ ಸಂಘಟನೆಯ ಅಥವಾ ಹಸಿರು ಬಾವುಟ, ಘೋಷಣೆಗಳಿಗೆ ಅವಕಾಶವಿರುವುದಿಲ್ಲ ಎಂದು ದಕ್ಷಿಣ ಕನ್ನಡ ಜಿಲ್ಲಾ ವಕ್ಫ್ ಸಲಹಾ ಸಮಿತಿಯ ಅಧ್ಯಕ್ಷ ಅಬ್ದುಲ್ ನಾಸಿರ್ ಲಕ್ಕಿಸ್ಟಾರ್ ತಿಳಿಸಿದ್ದಾರೆ. ಪ್ರತಿಭಟನಾ ಸಮಾವೇಶದ ಹಿನ್ನೆಲೆಯಲ್ಲಿ ಪೊಲೀಸ್ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ರಾಷ್ಟ್ರೀಯ ಹೆದ್ದಾರಿ ೭೩ರಲ್ಲಿ ವಾಹನ ದಟ್ಟನೆ ಉಂಟಾಗುವ ಸಾಧ್ಯತೆಯಿದ್ದು, ಸುಗಮ ಸಂಚಾರ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಇಂದು ಮಧ್ಯಾಹ್ನ ೧೨ರಿಂದ ರಾತ್ರಿ ೯ರವರೆಗೆ ಸ್ಥಳೀಯ, ತುರ್ತು ಹಾಗೂ ಅಗತ್ಯ ವಾಹನಗಳನ್ನು ಹೊರತು ಪಡಿಸಿ ಇತರ ವಾಹನಗಳನ್ನು ಮಾರ್ಗಗಳನ್ನು ಬದಲಾಯಿಸಿ ಸಂಚರಿಸಲು ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ್ ಅಗ್ರವಾಲ್ ಸೂಚಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**